# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 576 |
| ಸದಸ್ಯರ ಹೆಸರು | : | ಶ್ರೀ ಸುನೀಲ್‌ಗೌಡ ಪಾಟೀಲ್ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 13.12.2024. |
| ಉತ್ತರಿಸುವವರು | : | ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು. |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದ ಗ್ರಾಮ ಪಂಚಾಯತ್ ಸದಸ್ಯರ ಮತ್ತು ಅಧ್ಯಕ್ಷರುಗಳ ಬೇಡಿಕೆಗಳು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಇವರ ಬೇಡಿಕೆಗಳನ್ನು ಈಡೇರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು; (ವಿವರ ನೀಡುವುದು) | ಬಂದಿದೆ.<br>ಗ್ರಾಮ ಪಂಚಾಯತ್ ಸದಸ್ಯರ ಒಕ್ಕೂಟಗಳು ಸಲ್ಲಿಸಿರುವ ಬೇಡಿಕೆಗಳ ಪಟ್ಟಿಯನ್ನು ಅನುಬಂಧದಲ್ಲಿ ನೀಡಿದೆ.<br>ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಎಲ್ಲಾ ವೃಂದ ಸಂಘಗಳು ಹಾಗೂ ಗ್ರಾಮ ಪಂಚಾಯತಿ ಸದಸ್ಯರ ಒಕ್ಕೂಟಗಳು ಸಲ್ಲಿಸಿರುವ ಬೇಡಿಕೆಗಳ ಕುರಿತು ಪರಿಶೀಲಿಸಲಾಗಿರುತ್ತದೆ. ಅಧಿಕಾರಿ/ ಕೆಲವು ಸಿಬ್ಬಂದಿಗಳ ಸೇವಾ ವಿಷಯ/ ಬೇಡಿಕೆಗಳನ್ನು ಪರಿಶೀಲಿಸಲು ಆಯುಕ್ತರು, ಪಂಚಾಯತ್ ರಾಜ್ ಆಯುಕ್ತಾಲಯ ರವರ ಅಧ್ಯಕ್ಷತೆಯಲ್ಲಿ ಸಮಿತಿ ರಚನೆ ಮಾಡಲಾಗಿದ್ದು, ಸದರಿ ಸಮಿತಿಗೆ ಪರಿಶೀಲಿಸಿ ವರದಿಯನ್ನು ಸಲ್ಲಿಸಲು 3 ತಿಂಗಳ ಕಾಲಾವಕಾಶ ನೀಡಲಾಗಿದೆ. ಈ ಸಮಿತಿ ವರದಿ ಸಲ್ಲಿಸಿದ ನಂತರ ಬೇಡಿಕೆಗಳ ಕುರಿತು ಪರಿಶೀಲಿಸಿ ಕ್ರಮ ಕೈಗೊಳ್ಳಲಾಗುವುದು. |
| (ಆ) | ಗ್ರಾಮ ಪಂಚಾಯತ್ ಅಧ್ಯಕ್ಷರಿಗೆ ಕೇರಳ ಮಾದರಿಯಲ್ಲಿ ಸೌಲಭ್ಯಗಳನ್ನು ನೀಡುವ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ; ಈ ಕುರಿತು ಸರ್ಕಾರದ ಸ್ಪಷ್ಟ ನಿಲುವೇನು; | ಕೇರಳ ರಾಜ್ಯದಲ್ಲಿ ಕನಿಷ್ಠ 25,000-35,000 ಜನ ಸಂಖ್ಯೆಗೆ ಒಂದು ಗ್ರಾಮ ಪಂಚಾಯಿತಿ ಇದ್ದು, ಒಟ್ಟಾರೆ 942 ಗ್ರಾಮ ಪಂಚಾಯಿತಿಗಳಿರುತ್ತವೆ. ಆದರೆ ಕರ್ನಾಟಕ ರಾಜ್ಯದಲ್ಲಿ ಒಟ್ಟಾರೆ 5950 ಗ್ರಾಮ ಪಂಚಾಯಿತಿಗಳಿದ್ದು, ಚುನಾಯಿತ ಪ್ರತಿನಿಧಿಗಳ ಸಂಖ್ಯೆಯು ಸುಮಾರು 95,000ಕ್ಕೂ ಹೆಚ್ಚು ಇರುತ್ತದೆ. ಆದಕಾರಣ, ಎರಡು ರಾಜ್ಯಗಳ ವ್ಯವಸ್ಥೆಗಳನ್ನು ಹೋಲಿಕೆ ಮಾಡಲು ಸಾಧ್ಯವಾಗುವುದಿಲ್ಲ. |
| (ಇ) | ಗ್ರಾಮ ಪಂಚಾಯತ್ ಅಧ್ಯಕ್ಷರಿಗೆ/ ಸದಸ್ಯರಿಗೆ ಉಚಿತ ಬಸ್‌ಪಾಸ್, ಪಿಂಚಣಿ, ಟೋಲ್ ಫ್ರೀ ಪಾಸ್‌ಗಳನ್ನು ನೀಡುವ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ; ಈ ಬೇಡಿಕೆಗಳನ್ನು ಈಡೇರಿಸುವ ಕುರಿತು ಸರ್ಕಾರದ ಸ್ಪಷ್ಟ ನಿಲುವೇನು? | ಕರ್ನಾಟಕ ಪಂಚಾಯತ್ ರಾಜ್ (ಗ್ರಾಮ ಪಂಚಾಯತ್ ಅಧ್ಯಕ್ಷ, ಉಪಾಧ್ಯಕ್ಷ ಮತ್ತು ಸದಸ್ಯರುಗಳ ಪ್ರಯಾಣ ಭತ್ಯೆ ಮತ್ತು ದಿನಭತ್ಯೆ) ನಿಯಮಗಳು, 1994 ರನ್ವಯ ಗ್ರಾಮ ಪಂಚಾಯಿತಿಗಳ ಅಧ್ಯಕ್ಷ, ಉಪಾಧ್ಯಕ್ಷ ಹಾಗೂ ಸದಸ್ಯರುಗಳು ಅವರ ಪ್ರಕಾರ್ಯಗಳನ್ನು ನೆರವೇರಿಸುವುದಕ್ಕಾಗಿ, ಗ್ರಾಮ ಪಂಚಾಯತಿ ಪರಿಮಿತಿ ಆಚೆ ಅವರು ಮಾಡಿದ ಪ್ರಯಾಣಕ್ಕಾಗಿ ಇತ್ತೀಚಿನ ಪ್ರಯಾಣ ದರದನ್ವಯ ಪ್ರಯಾಣ ಭತ್ಯೆ ಮತ್ತು ದಿನಭತ್ಯೆಯನ್ನು ಪಾವತಿಸಲಾಗುತ್ತಿದೆ.<br>ಗ್ರಾಮ ಪಂಚಾಯಿತಿ ಸದಸ್ಯರಿಗೆ ಉಚಿತ ಬಸ್ ಪಾಸ್, ಪಿಂಚಣಿ ಮತ್ತು ಟೋಲ್ ಫ್ರೀ ಪಾಸ್‌ಗಳನ್ನು ನೀಡುವ ಪ್ರಸ್ತಾವನೆಯು ಸರ್ಕಾರದ ಮುಂದಿರುವುದಿಲ್ಲ. |

ಸಂಖ್ಯೆ: ಗ್ರಾಅಪ 662 ಗ್ರಾಪಂಅ 2024

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.